ಬಸವಕಲ್ಯಾಣ ತಾಲ್ಲೂಕಿನ ಕೆಲವು ಗ್ರಾಮಗಳಲ್ಲಿ ಪಶುವೈದ್ಯ ದವಾಖಾನೆ ತೆರೆಯುವ ಪ್ರಸ್ತಾವನೆ

1005 - ಶ್ರೀ ಬಸವರಾಜ್ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬಸವಕಲ್ಯಾಣ ತಾಲ್ಲೂಕಿನ ಬೋಸ್ಗಾ ರಾಜೋಳ, ಪಟಗೇರ ಹಾಗೂ ವೈಸಲಗಾ ಗ್ರಾಮಗಳಲ್ಲಿ ಪಶುವೈದ್ಯ ದವಾಖಾನೆ ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;*

ಆ) *ಇಲ್ಲದಿದ್ದಲ್ಲಿ ಈ ಗ್ರಾಮಗಳಲ್ಲಿ ಪಶುವೈದ್ಯ ದವಾಖಾನೆ ತೆರೆಯಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?*

ಶ್ರೀ ಎಂ. ವಸಂತ (ಪಶುಸಂಗೋಪನಾ ರಾಜ್ಯ ಸಚಿವರು) :

ಅ) ಪರಿಶೀಲಿಸಲಾಗುತ್ತಿದೆ.

ಆ) ಉದ್ಭವಿಸುವುದಿಲ್ಲ.

ಬಸವಕಲ್ಯಾಣದಲ್ಲಿ ಎಲ್.ಪಿ.ಟಿ. ದೂರದರ್ಶನ ಕೇಂದ್ರವನ್ನು ಪ್ರಾರಂಭಿಸುವುದು.

1006 - ಶ್ರೀ ಬಸವರಾಜ್ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ) : ಮಾನ್ಯ ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬಸವ ಕಲ್ಯಾಣದಲ್ಲಿ ಈಗಾಗಲೇ ಎಲ್.ಪಿ.ಟಿ. ದೂರದರ್ಶನ ಕೇಂದ್ರವನ್ನು ಪ್ರಾರಂಭಿಸಲು ಎಲ್ಲಾ ಸಿದ್ಧತೆಗಳು ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಈ ದೂರದರ್ಶನ ಕೇಂದ್ರವನ್ನು ಇಲ್ಲಿಯವರೆಗೆ ಪ್ರಾರಂಭಿಸದೇ ಇರಲು ಸಿಬ್ಬಂದಿ ಕೊರತೆ ಕಾರಣವಾಗಿಯೇ?*

ಇ) *ಹಾಗಿದ್ದಲ್ಲಿ ಈ ದೂರದರ್ಶನ ಕೇಂದ್ರವನ್ನು ಕೂಡಲೇ ಪ್ರಾರಂಭಿಸಲು ಸರ್ಕಾರ ಕೇಂದ್ರ ಸರ್ಕಾರದ ಮೇಲೆ ಒತ್ತಾಯ ತರಲು ಕ್ರಮ ಕೈಗೊಳ್ಳುವುದೇ?*

ಶ್ರೀ ಎಂ. ಸಿ. ನಾಣಯ್ಯ (ಕಾನೂನು ಹಾಗೂ ವಾರ್ತಾ ಮತ್ತು ಪ್ರಚಾರ ಸಚಿವರು) :

ಅ) ಹೌದು.

ಆ) ಹೌದು.

ಇ) ಹೌದು.

ಬಸವಕಲ್ಯಾಣದಲ್ಲಿ ಕ್ರೀಡಾಂಗಣ ನಿರ್ಮಾಣ.

1007 - ಶ್ರೀ ಬಸವರಾಜ್ ಪಾಟೀಲ್ ಅಟ್ಟೂರ್ (ಬಸವಕಾಲ್ಯಾಣ) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬಸವಕಲ್ಯಾಣದಲ್ಲಿ ಕ್ರೀಡಾಂಗಣ ನಿರ್ಮಿಸಲು ಸದಾನಂದಸ್ವಾಮಿ ಮಠದವರು 8 ಎಕರೆ ಜಮೀನನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?*

ಆ) *ಹಾಗಿದ್ದಲ್ಲಿ1996-97ರಲ್ಲಿ ಈ ಕ್ರೀಡಾಂಗಣ ನಿರ್ಮಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ?*

ಇ) *1996-97ರಲ್ಲಿ ಇದಕ್ಕಾಗಿ ಖರ್ಚು ಮಾಡಿದ ಹಣವೆಷ್ಟು ?*

ಈ) *1997-98ರಲ್ಲಿ ಈ ಕ್ರೀಡಾಂಗಣಕ್ಕಾಗಿ ಖರ್ಚು ಮಾಡಲಿರುವ ಹಣವೆಷ್ಟು ?*

ಉ) *ಈ ಕ್ರೀಡಾಂಗಣದ ಕಾಮಗಾರಿ ಯಾವಾಗ ಪೂರ್ಣಗೊಳ್ಳುವುದು ?*

ಶ್ರೀ ಆಜಯ್‌ಕುಮಾರ್ ಸರ್‌ನಾಯಕ್ (ಯುವಜನ ಸೇವಾ ಮತ್ತು ಕ್ರೀಡಾ ಸಚಿವರು) :

ಅ) ಇಲ್ಲ, ಆದರೆ ಸರ್ವೇ ನಂ. 139ರಲ್ಲಿ 8 ಎಕರೆ ಜಮೀನನ್ನು ಬಸವಕಲ್ಯಾಣದ ನಗರ ಸಭೆಯಿಂದ ಪಡೆಯಲಾಗಿದೆ.

ಆ) 1996-97ನೇ ಸಾಲಿನಲ್ಲಿ ಭೂ ಸೇನಾ ನಿಗಮಕ್ಕೆ ಅಂದಾಜು ಪಟ್ಟಿ ಮತ್ತು ನೀಲಿ ನಕ್ಷೆ ತಯಾರಿಸಲು ಕೋರಲಾಗಿದೆ.

ಇ) ಇಲ್ಲ

ಈ) 1997-98ನೇ ಸಾಲಿನಲ್ಲಿ ಜಿಲ್ಲಾ ಪಂಚಾಯತ್ ಅಡಿಯಲ್ಲಿ ರೂ. 5.00 ಲಕ್ಷಗಳ ಅನುದಾನವನ್ನು ಗೊತ್ತುಪಡಿಸಲಾಗಿದೆ.

ಉ) 1997-98ನೇ ಸಾಲಿನಲ್ಲಿ ಕ್ರೀಡಾಂಗಣ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಿ ಆದಷ್ಟು ಬೇಗನೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು.

ಕೊಡಗು ಜಿಲ್ಲೆಯಲ್ಲಿ ಗುರುತಿಸಿರುವ ಪ್ರವಾಸೋದ್ಯಮ ಕೇಂದ್ರಗಳು.

1008 - ಶ್ರೀ ಹೆಚ್.ಡಿ. ಬಸವರಾಜ್ (ವಿರಾಜಪೇಟೆ) : ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) *ಕೊಡಗು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಸ್ಥಳಗಳೆಂದು ಸರ್ಕಾರ ಎಷ್ಟು ಸ್ಥಳಗಳನ್ನು ಗುರುತಿಸಿದೆ ?*

ಆ) *ಈ ಸ್ಥಳಗಳಲ್ಲಿ ಸರ್ಕಾರ ಪ್ರವಾಸಿಗರ ಸಲುವಾಗಿ ಯಾವ ಅನುಕೂಲತೆಗಳನ್ನು ಕಲ್ಪಿಸಿದೆ ?*

ಇ) *ಅನುಕೂಲತೆಗಳಿಗಾಗಿ ವೆಚ್ಚಮಾಡಿದ ಹಣ ?*

ಈ) *ವೀರಾಜಪೇಟೆ ತಾಲ್ಲೂಕಿನಲ್ಲಿರುವ ಪ್ರವಾಸ ಧಾಮಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?*